# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1


Vol.No.02 | Issue. 19 | Pages. 2 | Date: 14-12-2025, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 19 – ಪುಟಗಳು : 2 | 14-12-2025 | ಭಾನುವಾರ | Ph: 8762954248 | ದರ : ₹1


# ಬೇಲೂರಿನಲ್ಲಿ ಅದ್ದೂರಿ 12ನೇ ಹನುಮ ಜಯಂತಿ

## ಪಟ್ಟಣದಾದ್ಯಂತ ರಾರಾಜಿಸಿದ ಕೇಸರಿ ಬಾವುಟ | ಸಾವಿರಾರು ಜನರು ಭಾಗಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಪಟ್ಟಣದ ಲಕ್ಷ್ಮೀಪುರ ಬಡಾವಣೆಯ ವೀರಾಂಜನೇಯಸ್ವಾಮಿ ದೇಗುಲದ 12ನೇ ವಾರ್ಷಿಕೋತ್ಸವ, ಹನುಮ ಜಯಂತಿ ಹಾಗೂ ಶೋಭಾಯಾತ್ರೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಶನಿವಾರ ಅರ್ಥಪೂರ್ಣವಾಗಿ ನಡೆಯಿತು.

ವೀರಾಂಜನೇಯಸ್ವಾಮಿ ದೇಗುಲದಲ್ಲಿ ಮಹಾ ಅಭಿಷೇಕ, ವಿಶೇಷ ಅಲಂಕಾರ, ಸಪರಿವಾರ ರಾಮತಾರಕ ಹವನ, ಪೂರ್ಣಾಹುತಿ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ನಡೆಯಿತು. ಸಾವಿರಾರು ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಮಧ್ಯಾಹ್ನ ವಿವಿಧ ಪುಷ್ಪಗಳಿಂದ ಅಲಂಕರಿಸಿದ್ದ ಮಂಟಪದಲ್ಲಿ ವೀರಾಂಜನೇಯ ಸ್ವಾಮಿಯ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ, ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಭಕ್ತರು ಸೇಬು, ಹಾಗೂ ಹಣದ ಹಾರವನ್ನು ಉತ್ಸವ ಮೂರ್ತಿಗೆ ಹಾಕಿ ಭಕ್ತಿಯನ್ನು ಮೆರೆದರು.

ಅಹಿತಕರ ಘಟನೆಗಳು ನಡೆಯದಂತೆ ಎಸ್ಪಿ ಮೊಹಮ್ಮದ್ ಸುಜೀತಾ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ವಹಿಸಲಾಗಿತ್ತು. ಪಟ್ಟಣದ ಹಲವಾರು ಆಂಜನೇಯ ದೇಗುಲಗಳಲ್ಲಿ ವಿಶೇಷ ಪೂಜೆ ಜರುಗಿದವು. ಹೋಳೆಬೀದಿಯ ಆಂಜನೇಯ ದೇಗುಲದ ಬಳಿ ದೇಗುಲದ ಟ್ರಸ್ಟ್ ಅಧ್ಯಕ್ಷ ಬಿ.ಗಿರೀಶ್ ನೇತೃತ್ವದಲ್ಲಿ ಭಕ್ತರಿಗೆ ಅನ್ನ ಸಂಪರ್ಪಣೆ ಮಾಡಲಾಯಿತು.

ವೀರಾಂಜನೇಯಸ್ವಾಮಿ ದೇಗುಲ ಸಮಿತಿ ಅಧ್ಯಕ್ಷ ಮೋಹನ್ ಅವರು ಮಾತನಾಡಿ, ಭಕ್ತರ ಸಹಕಾರದಿಂದ ಹನುಮ ಜಯಂತಿ ಅದ್ದೂರಿಯಾಗಿ ನಡೆದಿದೆಯೆಂದರು.

ಶಾಸಕ ಹೆಚ್.ಕೆ. ಸುರೇಶ್ ಅವರು ಮಾತನಾಡಿ, ಬೇಲೂರಿನ ಜನರು ಸಂಭ್ರಮದಿಂದ ಹನುಮ ಜಯಂತಿ ಆಚರಿಸುತ್ತಿದ್ದು, ಆಂಜನೇಯ ಕ್ಷೇತ್ರದ ಹಾಗೂ ನಾಡಿನ ಜನರಿಗೆ ಒಳಿತು ಮಾಡಲಿ ಎಂದರು.

ಮೆರವಣಿಗೆಯಲ್ಲಿ ಭಜರಂಗದಳದ ಸಕಲೇಶಪುರ ರಘು, ಕಾಫಿ ಬೆಳೆಗಾರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಅದ್ದೂರಿ ಕುಮಾರ್, ವೀರಶೈವ ಲಿಂಗಾಯತ ತಾಲ್ಲೂಕು ಅಧ್ಯಕ್ಷ ಅಡಗೂರು ಬಸವರಾಜು, ನಿಕಟಪೂರ್ವ ಅಧ್ಯಕ್ಷ ಬಲ್ಲೇನಹಳ್ಳಿ ರವಿಕುಮಾರ್, ಉಪಾಧ್ಯಕ್ಷ ಕುಮಾರಸ್ವಾಮಿ (ಅರುಣ್), ಬಿಜೆಪಿ ತಾಲ್ಲೂಕು ಅಧ್ಯಕ್ಷ ಕೌರಿ ಸಂಜಯ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಕೊರಟಿಕೆರೆ ಪ್ರಕಾಶ್, ಹನುಮ ಜಯಂತಿ ಸಮಿತಿಯ ಅನಂತರಾಜೇ ಅರಸು, ನಾಗೇಶ್ (ಗುಂಡ) ಇತರರಿದ್ದರು.

### ಆಕರ್ಷಕ ಮೆರವಣಿಗೆ

ನೂರಾರು ಯುವಕರು, ಭಕ್ತರು ತಮ್ಮ ವಾಹನಗಳಿಗೆ ಹನುಮ ಧ್ವಜ ಅಳವಡಿಸಿಕೊಂಡಿದ್ದರು. ಡಿ.ಜೆ. ಸದ್ದು, ವಿವಿಧ ವಾದ್ಯ, ಡೋಲುಗಳ ತಾಳಕ್ಕೆ ಕುಣಿದು ಕುಪ್ಪಳಿಸಿದರು. ಮಹಿಳೆಯರು ಮತ್ತು ಪುರುಷರಿಗಾಗಿ ಪ್ರತ್ಯೇಕ ಡಿಜೆ ವ್ಯವಸ್ಥೆ ಮಾಡಲಾಗಿತ್ತು. ಉಡುಪಿಯಿಂದ ಬಂದಿದ್ದ 30 ಮಕ್ಕಳು ಭಜನೆಯೊಂದಿಗೆ ನೃತ್ಯ ಮಾಡಿ ನೆರೆದಿದ್ದವರನ್ನು ಆಕರ್ಷಿಸಿದರು. ಮೆರವಣಿಗೆಯಲ್ಲಿ ಶ್ರೀರಾಮನ ಸ್ತಬ್ಧಚಿತ್ರದ ಗಮನ ಸೆಳೆಯಿತು.

# ಚಿರತೆ ದಾಳಿಗೆ ಬಲಿಯಾದ ಹಸು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ತಾಲೂಕಿನ ಕಾಡಂಚಿನ ಗ್ರಾಮಗಳಲ್ಲಿ ಚಿರತೆ ಹಾವಳಿ ಹೆಚ್ಚಾಗಿದ್ದು ಹೋಬಳಿಯ ಹಂಪಾಪುರ ಗ್ರಾಮದಲ್ಲಿ ಭೀಕರ ದಾಳಿಗೆ ಹಸು ಮೃತಪಟ್ಟಿದೆ.

ನಿರಂತರ ಚಿರತೆ ದಾಳಿಯಿಂದ ಗ್ರಾಮಸ್ಥರು ಆತಂಕಗೊಂಡಿದ್ದು ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಗ್ರಾಮದ ಸುತ್ತಮುತ್ತ ಚಿರತೆ ಜಾನುವಾರುಗಳ ಮೇಲೆ ದಾಳಿ ನಡೆಸುತ್ತಿವೆ. ಕಾಡು ಪ್ರಾಣಿಗಳು ಏಕಾಏಕಿ ಪ್ರತ್ಯಕ್ಷವಾಗುತ್ತವೆ. ಅದರಿಂದ ಮಹಿಳೆ ಮತ್ತು ಮಕ್ಕಳು ಮನೆಯಿಂದ ಹೊರಬರಲು ಹಿಂದೇಟು ಹಾಕುತ್ತಿದ್ದಾರೆ. ಚಿರತೆಗಳು ಪ್ರತಿದಿನವೂ ಪ್ರತ್ಯಕ್ಷವಾಗುತ್ತಿರುವುದರಿಂದ ಜಮೀನು ಕೆಲಸಕ್ಕೆ ಹೋಗಲು ಸಾಧ್ಯವಾಗುತ್ತಿಲ್ಲ. ಆಯಕಟ್ಟಿನ ಜಾಗಗಳಲ್ಲಿ ಬೋನು ಇಟ್ಟು ಚಿರತೆ ಸೆರೆ ಹಿಡಿಯಬೇಕೆಂದು ಆಗ್ರಹಿಸಿದ್ದಾರೆ.

# ಕಾಫಿ ಕಳ್ಳರು ಕೊನೆಗೂ ಪೊಲೀಸ್ ಬಲೆಗೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ತಾಲೂಕಿನ ಅರೇಹಳ್ಳಿಯಲ್ಲಿ ಕಾಫಿ ಕಳ್ಳತನ ಸಂದರ್ಭ ಮಾಲೀಕನ ಮೇಲೆ ಹಲ್ಲೆ ನಡೆಸಿ ಕಾಫಿಯೊಂದಿಗೆ ಪರಾರಿಯಾಗಿದ್ದ ಸ್ಥಳೀಯ ಖದೀಮರನ್ನು 24 ಗಂಟೆಯೊಳಗೆ ಬಂಧಿಸುವಲ್ಲಿ ಅರೇಹಳ್ಳಿ ಪೊಲೀಸರು ಯಶಸ್ವಿಯಾಗಿದ್ದಾರೆ.

ತಾಲೂಕಿನ ಅರೇಹಳ್ಳಿ ಪಟ್ಟಣ ಸಮೀಪದ ಉಲ್ಲಾಸ್ ನಗರದ ಜಗನಾಥ್ ಶೆಟ್ಟಿ ಎಂಬುವವರ ಮನೆಯ ಕಾಫಿ ಕಣದಲ್ಲಿ ಕಳೆದ ಕಳೆದ ಕೆಲ ದಿನಗಳ ಹಿಂದೆ ಕಾಫಿಯನ್ನು ನಾಲ್ಕೈದು ಜನರಿದ್ದ ಖದೀಮರ ಗುಂಪು ದೋಚಿ ಪರಾರಿಯಾಗಿದ್ದರು. ಈ ಘಟನೆಗೆ ಕಾರಣರಾದವರನ್ನು ಪತ್ತೆ ಹಚ್ಚಬೇಕೆಂದು ಕಾಫಿ ಬೆಳೆಗಾರರ ಸಂಘದ ಪದಾಧಿಕಾರಿಗಳು ಪೊಲೀಸರಿಗೆ ಮನವಿ ಸಲ್ಲಿಸಿದ್ದರು. ಕಳೆದ ಬುಧವಾರ ಬೆಳಿಗ್ಗೆ 4.30ರ ಸಮಯದಲ್ಲಿ ಜಗನಾಥ್ ಶೆಟ್ಟಿಯವರ ಕಣಕ್ಕೆ ನುಗ್ಗಿ ಕಾಫಿ ಕದಿಯುತ್ತಿದ್ದ ಸಂದರ್ಭ ಎಚ್ಚರಗೊಂಡ ಜಗನ್ನಾಥ ಶೆಟ್ಟಿಯರ ಮೇಲೆ ಹಲ್ಲೆ ನಡೆಸಿ ಬಂದೂಕಿನೊಂದಿಗೆ ಕಾಫಿ ಕದ್ದೊಯ್ದಿದ್ದರು. ಮಾರಣಾಂತಿಕ ಹಲ್ಲೆ ನಡೆಸಿದ್ದ ಬಗ್ಗೆ ಬೆಳೆಗಾರರ ಸಂಘದವರು ಪೊಲೀಸರ ಮೇಲೆ ಆಕ್ರೋಶಿತರಾಗಿ ಘಟನೆಗೆ ಕಾರಣರಾದವರನ್ನು ಕೂಡಲೇ ಬಂಧಿಸಿ ಕ್ರಮ ಕೈಗೊಳ್ಳಬೇಕೆಂದು ಒತ್ತಡ ಹಾಕಿದ್ದರು.

ಈ ಹಿನ್ನೆಲೆಯಲ್ಲಿ ಕಾಫಿ ಕಳ್ಳತನ ಮತ್ತು ವ್ಯಕ್ತಿಯ ಮೇಲೆ ಹಲ್ಲೆ ನಡೆದ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ ಮತ್ತು ತಂಡ ಆಗಮಿಸಿ ಪರಿಶೀಲಿಸಿ, ಖದೀಮರ ಪತ್ತೆ ಹಚ್ಚಲು ವಿಶೇಷ ತನಿಖಾ ತಂಡ ರಚಿಸಿ ಆರೋಪಿಗಳಿಗಾಗಿ ಬಲೆ ಬೀಸಿದ್ದರು.

ವೃತ್ತ ನಿರೀಕ್ಷಕ ಜಗದೀಶ್, ಪಿಎಸ್ಐಗಳಾದ ಸುರೇಶ್, ಶಿವನಗೌಡ.ಜಿ.ಪಾಟೀಲ್, ಎಎಸ್ಐ ವಿರೂಪಾಕ್ಷ, ಸಿಬ್ಬಂದಿ ಶಂಸುದ್ದೀನ್ ಸೊನ್ನದ್, ಸುಪ್ರಿತ್, ಅವಿನಾಶ್, ನಂದೀಶ್, ಶಶಿಕುಮಾರ್, ಮಂಜುನಾಥ್, ಪುಟ್ಟಸ್ವಾಮಿ, ಹೇಮಕಾಂತ್ ಸೇರಿದಂತೆ ಇತರರಿದ್ದರು.

# ಡಿ. 22-23 ರಂದು ಹಳೇಬೀಡಿನಲ್ಲಿ ಶಾಂತಲಾ ಮಹೋತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಬೇಲೂರು ತಾಲ್ಲೂಕಿನ ಹಳೇಬೀಡು ಕರ್ನಾಟಕ ಪಬ್ಲಿಕ್ ಶಾಲಾ ಆವರಣದಲ್ಲಿ ಡಿ. 22 ಹಾಗು 23 ರಂದು ಶಾಂತಲಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆಯೆಂದು ಮಾಜಿ ಶಾಸಕ ಹಾಗು ಮಹೋತ್ಸವ ಸಮಿತಿ ಅಧ್ಯಕ್ಷ ಕೆ.ಎಸ್.ಲಿಂಗೇಶ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಮೊದಲ ದಿನ ಮಂಗಳವಾರ ಸಂಜೆ 4 ಗಂಟೆಗೆ ವಿವಿಧ ಕಲಾ ತಂಡಗಳಿಂದ ಅಂಬೇಡ್ಕರ್ ವೃತ್ತದಿಂದ ಹೊಯ್ಸಳೇಶ್ವರ ವೃತ್ತದ ಸಾಂಸ್ಕೃತಿಕ ಮೆರವಣಿಗೆ ವರೆಗೆ ನಡೆಯಲಿದೆ. ಆ ನಂತರ ಸ್ಥಳೀಯ ಕಲಾವಿದರು ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ. ಮಿಮಿಕ್ರಿ ಕಲಾವಿದ ಗೋಪಿ ಅವರು ಹಾಸ್ಯ ವೈಭವ ಹಮ್ಮಿಕೊಳ್ಳಲಾಗಿದೆ. ಪೌರಾಣಿಕ ನಾಟಕ ಪ್ರದರ್ಶನ ಜೊತೆಗೆ ಪುಸ್ತಕ ಬಿಡುಗಡೆ ಸಹ ಇರಲಿದೆಯೆಂದು ತಿಳಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ, ಹಳೇಬೀಡು ಗ್ರಾಮ ಪಂಚಾಯಿತಿ, ಹೊಯ್ಸಳೇಶ್ವರ ಪ್ರವಾಸೋದ್ಯಮ ಮತ್ತು ಗ್ರಾಮೀಣಾಭಿವೃದ್ಧಿ ಟ್ರಸ್ಟ್, ಹಳೇಬೀಡು ಕನ್ನಡ ಸಾಹಿತ್ಯ ಪರಿಷತ್, ಸ್ತ್ರೀ ಶಕ್ತಿ ಸಹಾಯ ಸಂಘ ಹಾಗು ವಿವಿಧ ಪ್ರಗತಿಪರ ಸಂಘಟನೆಗಳು ಹಾಗು ಸ್ಥಳೀಯ ಮುಖಂಡರು ಮಹೋತ್ಸವದ ಆಯೋಜಕರಾಗಿದ್ದಾರೆಂದರು.

ಡಿ.23 ರಂದು ಆಳ್ವಾಸ್ ಪ್ರತಿಷ್ಠಾನ ಮೂಡಬಿದಿರೆ ಅವರಿಂದ ಆಳ್ವಾಸ್ ಸಾಂಸ್ಕೃತಿಕ ವೈಭವ ನಡೆಯಲಿದೆ. ಕಲಾತ್ಮಕ ಯೋಗ, ಶಾಸ್ತ್ರೀಯ ನೃತ್ಯ-ಅಷ್ಟಲಕ್ಷ್ಮಿ, ಆಂಧ್ರದ ಜನಪದ ಬಂಜಾರ ನೃತ್ಯ, ಬಡಗುತಿಟ್ಟು ಯಕ್ಷಗಾನ-ಶಂಕರಾರ್ಧ ಶರೀರಿಣಿ, ಮಣಿಪುರಿ ಸ್ಟಿಕ್ ಡ್ಯಾನ್ಸ್, ಗುಜರಾತಿನ ಗಾರ್ಭ ಮತ್ತು ದಾಂಡಿಯಾ, ಮಲ್ಲಕಂಬ ಹಾಗು ರೋಪ್ ಕಸರತ್ತು, ಸೃಜನಾತ್ಮಕ ನೃತ್ಯ, ಕಥಕ್ ನೃತ್ಯ- ವರ್ಷಧಾರೆ, ಪುರುಲಿಯಾ ಸಿಂಹ ನೃತ್ಯ, ಯಕ್ಷಗಾನ ಶ್ರೀ ರಾಮ ಪಟ್ಟಾಭಿಷೇಕ, ಬೊಂಬೆ ವಿನೋದಾವಳಿ ಸಾಂಸ್ಕೃತಿಕ ವೈಭವದ ವಿಶೇಷತೆಯೆಂದರು.

ಹೊಯ್ಸಳೋತ್ಸವದ ಕೊರಗು ನೀಗಿಸಿ ಸ್ಥಳೀಯ ಹಾಗು ಸುತ್ತಲ ಜನರಿಗೆ ಮನರಂಜನೆ ನೀಡಲು ಶಾಂತಲಾ ಮಹೋತ್ಸವ ನಡೆಸಲಾಗುತ್ತಿದೆ. ಅದಕ್ಕೂ ಮುನ್ನ ರೈತ ದಿನಾಚರಣೆ ನಡೆಯಲಿದೆ.

ನಂತರ ಸಾಂಸ್ಕೃತಿಕ ವೈಭವ, ವಸ್ತು ಪ್ರದರ್ಶನ ಇರಲಿದೆ. ಅದಕ್ಕಾಗಿ ಜನರನ್ನು ಕರೆತರಲು ಸಾರಿಗೆ ಬಸ್ ವ್ಯವಸ್ಥೆ ಮಾಡಲಾಗಿದೆಯೆಂದರು.

ಹಳೇಬೀಡು ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸಾನ್ನಿಧ್ಯದಲ್ಲಿ ಶಾಸಕ ಹೆಚ್.ಕೆ.ಸುರೇಶ್ ಮಹೋತ್ಸವ ಉದ್ಘಾಟಿಸಲಿದ್ದಾರೆ. ಕಾಂಗ್ರೆಸ್ ಮುಖಂಡರಾದ ಗ್ರಾನೈಟ್ ರಾಜಶೇಖರ್, ವೈ.ಎನ್.ಕೃಷ್ಣೇಗೌಡ, ಜಿಲ್ಲಾಧ್ಯಕ್ಷ ಈ.ಹೆಚ್.ಲಕ್ಷ್ಮಣ್, ಬಿಜೆಪಿ ಮುಖಂಡ ಕೊರಟಿಕೆರೆ ಪ್ರಕಾಶ್ ಭಾಗವಹಿಸಲಿದ್ದಾರೆಂದರು.

ರಾಜ್ಯದ ಬೇರೆ ಬೇರೆ ಕಡೆ ಹಂಪಿ ಉತ್ಸವ, ಮಂಡ್ಯದಲ್ಲಿ ಕಾವೇರಿ ಆರತಿ, ಕಿತ್ತೂರು ಉತ್ಸವ ಮೊದಲಾದ ಉತ್ಸವಗಳು ನಡೆಯುತ್ತಿವೆ. ಹಲವು ಕಾರಣಗಳಿಂದ ಐತಿಹಾಸಿಕ ಹೊಯ್ಸಳೋತ್ಸವಕ್ಕೆ ಗ್ರಹಣ ಇದೆ. ಈ ಸಂಬಂಧ ಅನೇಕ ಸಲ ಜಿಲ್ಲಾಡಳಿತ, ಸರ್ಕಾರಕ್ಕೆ ಮನವಿ ಮಾಡಿದ್ದರೂ ಯಾವ ಪ್ರಯೋಜನ ಆಗಿಲ್ಲ. ಹಾಲಿ ಶಾಸಕರೂ ಪ್ರಯತ್ನ ಮಾಡಿದರೂ ಸಾಧ್ಯವಾಗಿಲ್ಲ. ಅದಕ್ಕಾಗಿ ನಿರ್ಮಿಸಿದ್ದ ಬಿಲ್ಡಿಂಗ್ ಹಾಳಾಗುತ್ತಿದೆಯೆಂದು ಬೇಸರ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿ ಸೊಪ್ಪಿನಹಳ್ಳಿ ಶಿವಣ್ಣ, ಶಿವಕುಮಾರ್, ಡಾ. ಎಂ.ಸಿ.ಕುಮಾರ್, ಶಂಕರ್‌ನಾಗ್, ಭಾನುಪ್ರಕಾಶ್ ಇದ್ದರು.

# ಸಾರ್ವಜನಿಕರ ಸೆಳೆಯುತ್ತಿದೆ ಕಾವೇರಿ ಪುಷ್ಕರಣಿ ಮತ್ಸ್ಯರಾಶಿ

## ನಿತ್ಯ ಸಾವಿರಾರು ಪ್ರವಾಸಿಗರಿಂದ ವೀಕ್ಷಣೆ | ಸುಬ್ರಹ್ಮಣ್ಯಸ್ವಾಮಿ ಜಾತ್ರೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಕಲಗೂಡು: ತಾಲೂಕಿನ ರಾಮನಾಥಪುರದ ಪ್ರಸಿದ್ಧ ಕಾವೇರಿ ವಹ್ನಿ ಪುಷ್ಕರಣಿಯ ಮತ್ಸ್ಯರಾಶಿಗಳು ಆಕರ್ಷಣೀಯ ತಾಣವಾಗಿದೆ.

ಪುರಾಣ ಪ್ರಸಿದ್ಧ ರಾಮೇಶ್ವರ ದೇವಸ್ಥಾನ ಸನ್ನಿಧಿಯಲ್ಲಿ ಹರಿಯುವ ಕಾವೇರಿ ನದಿಯ ವಹ್ನಿ ಪುಷ್ಕರಣಿಯಲ್ಲಿ ಸಾವಿರಾರು ಮೀನುಗಳು ನೆಲೆಸಿವೆ. ಅಂದ ಚಂದದ ಗಾತ್ರದಲ್ಲಿರುವ ಮೀನುಗಳನ್ನು ನೋಡಿ ಆನಂದಿಸಲು ಅಪಾರ ಭಕ್ತರು ಭೇಟಿ ನೀಡಿ ಕಣ್ತುಂಬಿಕೊಳ್ಳುತ್ತಾರೆ. ಇದೀಗ ಕಳೆದೊಂದು ತಿಂಗಳಿನಿಂದ ನಡೆಯುತ್ತಿರುವ ಪ್ರಸನ್ನ ಸುಬ್ರಹ್ಮಣ್ಯಸ್ವಾಮಿ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಆಗಮಿಸುತ್ತಿರುವ ಭಕ್ತರು ಮೀನುಗಳನ್ನು ನೋಡಲು ತಂಡೋಪತಂಡವಾಗಿ ಆಗಮಿಸುತ್ತಿದ್ದು ಜಾತ್ರೆಯ ಸಂಭ್ರಮವನ್ನು ಸಾಕ್ಷೀಕರಿಸುತ್ತಿದೆ.

ನಿತ್ಯ ಜಾತ್ರೆಗೆ ಬರುವ ಸಹಸ್ರಾರು ಭಕ್ತರು ಕಾವೇರಿ ನದಿಯಲ್ಲಿ ಮಿಂದು ದೇವಸ್ಥಾನದಲ್ಲಿ ಪೂಜಾ ಕಾರ್ಯಗಳನ್ನು ಪೂರೈಸಿದ ನಂತರ ವಹ್ನಿ ಪುಷ್ಕರಣಿಗೆ ಭೇಟಿ ನೀಡದೆ ಹಿಂದಿರುಗುವುದಿಲ್ಲ. ವಹ್ನಿ ಪುಷ್ಕರಣಿ ತಟದಲ್ಲಿ ಮೀನುಗಳಿಗೆ ಕಡಲೆಕಾಯಿ ಕುರುಕಲು ತಿಂಡಿಗಳನ್ನು ಆಹಾರವಾಗಿ ಎಸೆಯುತ್ತಿದ್ದು ಒಂದರ ಮೇಲೊಂದು ಮೇಲೆದ್ದು ಈಜುವ ಮೀನುಗಳ ಕಲವರ ಭಕ್ತರ ಕಣ್ಮನ ತಣಿಸುತ್ತಿದೆ. ರಾಮೇಶ್ವರ ದೇವಾಲಯದ ಪಕ್ಕದಲ್ಲಿರುವ ಪ್ರಸಿದ್ಧ ಕಾವೇರಿ ಪುಷ್ಕರಿಣಿಗಳಲ್ಲಿ ವಹ್ನಿ ಪುಷ್ಕರಣಿ ಒಂದು. ಇನ್ನೂ ಎರಡು ಕೆ.ಆರ್. ನಗರದ ಬಳಿ ಅರ್ಕಪುಷ್ಕರಣಿ ಮತ್ತು ತಮಿಳುನಾಡಿನ ಶ್ರೀರಂಗದಲ್ಲಿ ಚಂದ್ರ ಪುಷ್ಕರಣಿ ಇದೆ. ಈ ಪುಷ್ಕರಣಿಯಲ್ಲಿರುವ ಮೀನುಗಳು ದೇವತೆಗಳ ಅವತಾರವೆಂಬ ನಂಬಿಕೆಯಿದ್ದು ಎಂತಹ ಭಯಂಕರವಾದ ಪ್ರವಾಹ ಬಂದರೂ ಈ ಮೀನಿಗಳು ಮಾತ್ರ ಅತ್ತಿತ್ತ ಕದಲುವುದಿಲ್ಲ. ಇಲ್ಲಿಗೆ ಬರುವ ಪ್ರವಾಸಿಗಾರು ಪುರಿ ಕಡ್ಲೆ ಕಾಯಿಯನ್ನು ನೀರಿಗೆ ಎಸೆದರೆ ಬಾರಿ ಗಾತ್ರದ ಮೀನುಗಳು ಮೇಲಕ್ಕೇಳುತ್ತವೆ. ನೀರಿನಲ್ಲಿ ನೆಗೆದು ಹಾರುವ ಮೀನುಗಳನ್ನು ನೋಡಿ ಮಕ್ಕಳಿಗೆ ಆಗುವ ನಂದ ವರ್ಣನಾತೀತ. ಮೈಸೂರಿನ ಅರಸ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು ರಾಮನಾಥಪುರ ಕ್ಷೇತ್ರಕ್ಕೆ ಆಗಮಿಸಿದಾಗ ಮೀನಿಗೆ ಮೂಗುತಿಯನ್ನು ಚುಚ್ಚಿ ಅವುಗಳ ಅಂದವನ್ನು ಕಣ್ತುಂಬಿಕೊಂಡಿದ್ದರೆಂದು ಹಿರಿಯರು ಹೇಳುತ್ತಾರೆ.

### ಆಹಾರ ಕೊರತೆ

ಶ್ರೀ ಕ್ಷೇತ್ರದಲ್ಲಿ ಮಾರ್ಗಶಿರ ಮಾಸದಲ್ಲಿ ತಿಂಗಳ ಕಾಲ ನಡೆಯುವ ಜಾತ್ರೆ ಸಮಯದಲ್ಲಿ ಮೀನುಗಳಿಗೆ ಆಹಾರದ ಕೊರತೆ ಕಾಡುವುದಿಲ್ಲ. ಮತ್ಸ್ಯರಾಶಿ ಕಣ್ತುಂಬಿಕೊಳ್ಳುವ ಸಲುವಾಗಿ ಜಾತ್ರೆಗೆ ಬರುವ ಸಹಸ್ರಾರು ಭಕ್ತರು ಕಡಲೆಪುರಿ ಸಿಹಿ ತಿನಿಸುಗಳನ್ನು ಮೀನುಗಳಿಗೆ ನೀಡುತ್ತಾರೆ. ಆದರೆ ಬೇಸಿಗೆಯ ದಿನಗಳಲ್ಲಿ ಶ್ರೀ ಕ್ಷೇತ್ರಕ್ಕೆ ಬರುವ ಭಕ್ತರ ಸಂಖ್ಯೆ ತೀರ ಕಡಿಮೆ. ಹೀಗಾಗಿ ವಹ್ನಿ ಪುಷ್ಕರಣಿಗೆ ಜನರು ಭೇಟಿ ನೀಡುವುದಿಲ್ಲ. ಪರಿಣಾಮವಾಗಿ ಮೀನುಗಳಿಗೆ ಆಹಾರದ ಕೊರತೆ ವಿಪರೀತವಾಗಿದೆ. ನದಿ ನೀರು ತಗ್ಗಿದ್ದರಿಂದ ಆಹಾರ ಅರಸಿಕೊಂಡು ಕೆಲವು ಮೀನುಗಳು ವಹ್ನಿ ಪುಷ್ಕರಣಿಯಿಂದ ಹೊರಹೋಗುತ್ತಿವೆ. ವಹ್ನಿ ಪುಷ್ಕರಣಿ ದಡಕ್ಕೆ ಬರುವ ಮೀನುಗಳು ಕಳ್ಳರಿಗೆ ಆಹಾರವಾಗುತ್ತಿರುವುದು ದುರಂತವೇ ಸರಿ. ಆಹಾರವಿಲ್ಲದೆ ಕೆಲವು ಮೀನುಗಳು ಪ್ರಾಣ ಕಳೆದುಕೊಳ್ಳುತ್ತಿವೆ.

ನಿರ್ವಹಣೆ ಕೊರತೆಯಿಂದಾಗಿ ಬೇಸಿಗೆಯಲ್ಲಿ ನದಿ ನೀರು ಇಳಿಕೆಯಾಗಿ ಮೀನುಗಳಿಗೆ ಜೀವಸೆಲೆ ಸಿಗದೆ ಮತ್ಸ್ಯರಾಶಿ ನಶಿಸುವ ಆತಂಕ ಎದುರಾಗಿದೆ. ಮೀನುಗಳು ಕಳ್ಳರ ಪಾಲಾಗುವುದನ್ನು ತಡೆಗಟ್ಟಬೇಕು. ರಾತ್ರಿ ವೇಳೆ ಕಾವಲುಗಾರರನ್ನು ನೇಮಿಸಬೇಕು. ವಹ್ನಿ ಪುಷ್ಕರಣಿಗೆ ಫೋಕಸ್ ಲೈಟ್ ಹಾಗೂ ಸಿಸಿ ಕ್ಯಾಮರಾ ಅಳವಡಿಸಬೇಕು. ಮೀನುಗಾರಿಕೆ ಇಲಾಖೆ ಮೀನಮೇಷ ಎಣಿಸದೆ ವಹ್ನಿ ಪುಷ್ಕರಣಿಯಲ್ಲಿರುವ ಮೀನುಗಳ ಸಂರಕ್ಷಣೆಗೆ ಕ್ರಮ ಕೈಗೊಳ್ಳಬೇಕು ಎನ್ನುತ್ತಾರೆ ಸ್ಥಳೀಯರು.

ರಾಮನಾಥಪುರ ಕಾವೇರಿ ವಹ್ನಿ ಪುಷ್ಕರಣಿ ಪ್ರಸಿದ್ಧ ಪುಣ್ಯಕ್ಷೇತ್ರವಾಗಿದ್ದು ಸಹಸ್ರಾರು ಭಕ್ತರ ಕಣ್ಮನ ಸೆಳೆಯುತ್ತದೆ. ಜಾತ್ರೆಗೆ ಬರುವ ಭಕ್ತರಿಗೆ ಆಕರ್ಷಣೀಯ ಕೇಂದ್ರವಾಗಿದೆ. ಈ ಪುಣ್ಯ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಿ ಪ್ರವಾಸೋದ್ಯಮವಾಗಿಸಬೇಕು. ಪ್ರತಿನಿತ್ಯ ಮೀನುಗಳಿಗೆ ಆಹಾರ ನೀಡುವ ವ್ಯವಸ್ಥೆ ಆಗಬೇಕು. ಬೇಸಿಗೆಯಲ್ಲಿ ಮೀನುಗಳಿಗೆ ರಕ್ಷಣೆ ಒದಗಿಸಬೇಕು. ಇಂತಹ ಪುಷ್ಕರಣಿಯಲ್ಲಿ ಮತ್ಸ್ಯ ರಾಶಿ ಕಳೆದುಕೊಂಡರೆ ಬಹುದೊಡ್ಡ ನಷ್ಟವಾಗುತ್ತದೆ. ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇಚ್ಛಾಶಕ್ತಿ ಪ್ರದರ್ಶಿಸಿ ವಹ್ನಿ ಪುಷ್ಕರಣಿ ಅಭಿವೃದ್ಧಿ ಪಡಿಸಿ ಭಕ್ತರು ಮೀನುಗಳನ್ನು ಕಣ್ತುಂಬಿಕೊಳ್ಳಲು ಅನುಕೂಲ ಮಾಡಿಕೊಡಬೇಕು. ಮೀನುಗಳ ಕಡದಲ್ಲಿ ದೃಷ್ಟಿ ಮತ್ಸ್ಯ ಪೂಜೆ ನಡೆಸಲು ಅಗತ್ಯ ಕ್ರಮ ವಹಿಸಬೇಕು. ಈ ಮೀನುಗಳ ಸಂತತಿಯನ್ನು ತಲೆಮಾರುಗಳ ವರೆಗೆ ಕಾಪಾಡಬೇಕು ಎಂಬುದು ಭಕ್ತರ ಒತ್ತಾಸೆಯಾಗಿದೆ.


### ಶಿಕಾರಿಗೆ ಬ್ರೇಕ್ ಹಾಕಲು ಆಗ್ರಹ

ಬೇಸಿಗೆ ಸಮಯದಲ್ಲಿ ನದಿ ನೀರು ಕಡಿಮೆಯಾಗಿ ಆಹಾರ ಕೂಡ ಸಿಗದೆ ಮೀನುಗಳು ಜೀವಿಸಲು ತೊಡಕಾಗಿದೆ. ನದಿ ನೀರು ಕಡಿಮೆಯಾದ ಸಂದರ್ಭದಲ್ಲಿ ಪ್ರತಿವರ್ಷ ಮೀನುಗಳ ಶಿಕಾರಿ ಕೂಡ ನಡೆಸಲಾಗುತ್ತಿದೆ. ರಾತ್ರಿ ವೇಳೆ ಮೀನುಗಳನ್ನು ಕದ್ದು ಸಾಗಿಸುವ ಕೃತ್ಯ ನಿಂತಿಲ್ಲ. ಕಳೆದ ಹಲವಾರು ವರ್ಷಗಳಿಂದ ಮೀನುಗಳನ್ನು ಕದ್ದು ಸಾಗಿಸುತ್ತಿರುವವರನ್ನು ಪತ್ತೆಹಚ್ಚಿ ಬಂಧಿಸುವಂತೆ ಸ್ಥಳೀಯರು ಒತ್ತಾಯಿಸುತ್ತಾ ಬಂದಿದ್ದರೂ ಪ್ರಯೋಜವಾಗಿಲ್ಲ. ಹಲವು ಸಲ ಮೀನುಗಳನ್ನು ಕದಿಯಲು ಬಂದಿದ್ದ ಕಳ್ಳರು ಅಲ್ಲಿಯೇ ಬಿಟ್ಟು ಹೋಗಿದ್ದ ಭಾರಿ ಗಾತ್ರದ ಮೀನು ಅಸುನೀಗಿತ್ತಿವೆ. ಸ್ಥಳೀಯರು ಸತ್ತ ಮೀನು ಹೊತ್ತು ರಾಮನಾಥಪುರದಲ್ಲಿ ಕೆಲಸಲ ಪ್ರತಿಭಟನೆ ನಡೆಸುವ ಮೂಲಕ ಮೀನುಗಳಿಗೆ ರಕ್ಷಣೆ ನೀಡುವಂತೆ ಆಗ್ರಹಿಸಿದ್ದರು. ಪ್ರತಿವರ್ಷ ಬೇಸಿಗೆ ಸಮಯದಲ್ಲಿ ನೀರು ನಿಲ್ಲುವಂತೆ ಸೂಕ್ತ ತಡೆಗೋಡೆ ಹಾಕಿ ಮರಳು ಮೂಟೆ ಕಟ್ಟದೆ ವಹ್ನಿ ಪುಷ್ಕರಣಿಯಲ್ಲಿರುವ ಅಪಾರ ಮೀನುಗಳು ಹೊರ ಹೋಗುತ್ತಿವೆ. ಸಿಸಿ ಕ್ಯಾಮರಾ ಇಲ್ಲದ ಕಾರಣ ನೀರು ಕಡಿಮೆಯಾಗಿರುವ ಅವಕಾಶ ಕಾದು ಕಳ್ಳರು ಕೂಡ ರಾತ್ರಿವೇಳೆ ರಾಜಾರೋಷವಾಗಿ ಭಾರಿ ಗಾತ್ರದ ಮೀನುಗಳನ್ನು ಕದಿಯುವ ಕೃತ್ಯಕ್ಕೆ ಕಡಿವಾಣ ಬಿದ್ದಿಲ್ಲ. ಪರಿಣಾಮವಾಗಿ ದೇವರ ಪ್ರತಿರೂಪವೆಂದು ಭಕ್ತರು ನಂಬಿರುವ ಮತ್ಸ್ಯ ರಾಶಿಗಳ ಜೀವಕ್ಕೆ ಬೆಲೆಯೇ ಇಲ್ಲವಾಗಿದೆ. ಈ ಪುಷ್ಕರಣಿಯ ಒಂದು ಕಿ.ಮೀ ಅಂತರದಲ್ಲಿ ಯಾವುದೆ ರೀತಿಯ ಮೀನುಗಳನ್ನು ಹಿಡಿಯಬಾರದೆಂದು ಸರ್ಕಾರ ನಿಷೇಧವನ್ನು ಗಾಳಿಗೆ ತೂರಲಾಗಿದೆ.

# ಕ್ಷೇತ್ರ ಅಭಿವೃದ್ಧಿಯ 25 ಕೋಟಿ ರೂ. ಅನುದಾನ ಹಂಚಿಕೆ

## ಗ್ರಾಮೀಣ ಪ್ರದೇಶಕ್ಕೆ 16 ಕೋಟಿ ರೂ. | ಶಾಸಕ ಎ.ಮಂಜು ಮಾಹಿತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಕಲಗೂಡು: ವಿಧಾನಸಭಾ ಕ್ಷೇತ್ರ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ 25 ಕೋಟಿ ರೂ.ಗಳನ್ನು ವಿವಿಧ ಕಾಮಗಾರಿಗೆ ಹಂಚಿಕೆ ಮಾಡಲಾಗಿದೆ ಎಂದು ಶಾಸಕ ಎ.ಮಂಜು ಹೇಳಿದರು. ಕೊಣನೂರು ಪ್ರವಾಸಿ ಮಂದಿರದಲ್ಲಿ ಶನಿವಾರ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಕ್ಷೇತ್ರ ಅಭಿವೃದ್ಧಿಗೆ ಒತ್ತು ನೀಡುವ ಸಲುವಾಗಿ ಶಾಸಕರಿಗೆ 25 ಕೋಟಿ. ರೂ. ಅನುದಾನವನ್ನು ಸರ್ಕಾರ ನೀಡಿದೆ. ಈ ಹಣ ಬಳಕೆ ಸಲುವಾಗಿಯೂ ಕೂಡ ಜಿಪಂ, ಪಿಡಬ್ಲ್ಯೂಡಿ, ಪಟ್ಟಣ ಪಂಚಾಯಿತಿ ಹಾಗು ನೀರಾವರಿ ಇಲಾಖೆ ಇಂಜಿನಿಯರ್‌ಗಳ ಸಭೆ ನಡೆಸಿ ಯೋಜನೆ ರೂಪಿಸುವಂತೆ ಸೂಚನೆ ನೀಡಿದ್ದೇನೆ. ಪ್ರಮುಖವಾಗಿ ವಿದ್ಯಾರ್ಥಿ ನಿಲಯಗಳಿಗೆ 1 ಕೋಟಿ ರೂ., ಬಸ್ ನಿಲ್ದಾಣ ಅಭಿವೃದ್ಧಿಗೆ 1 ಕೋಟಿ ರೂ., ಎಸ್‌ಸಿ, ಎಸ್‌ಟಿ ಸಮುದಾಯ ಭವನಕ್ಕೆ 1 ಕೋಟಿ ರೂ., 4 ಕೋಟಿ ರೂ.ಗಳನ್ನು ಪಿಡಬ್ಲ್ಯೂಡಿ ರಸ್ತೆ, ಉಳಿದ 16 ಕೋಟಿ ರೂ.ಗಳನ್ನು ಗ್ರಾಮೀಣ ಅಭಿವೃದ್ಧಿಗೆ ಮೀಸಲಿಡಲಾಗಿದೆ ಎಂದು ಹೇಳಿದರು.

### ಸೇತುವೆಗೆ 45 ಕೋಟಿ ರೂ.

ತಾಲೂಕಿನ ಕೊಣನೂರು-ಕಟ್ಟೇಪುರ ನಡುವೆ ಸಂಪರ್ಕ ಸೇತುವೆ ನಿರ್ಮಾಣಕ್ಕೆ 45 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಬಿಡುಗಡೆಯಾಗಿದೆ. ನಾನು ಈ ಹಿಂದೆ ಸಚಿವನಾಗಿದ್ದ ವೇಳೆ ಗೊರೂರು, ರಾಮನಾಥಪುರ, ರುದ್ರಪಟ್ಟಣ ಹಾಗೂ ಕೊಣನೂರು-ಕಟ್ಟೇಪುರ ನಡುವೆ ಸೇತುವೆ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೆ. ಆ ವೇಳೆ ಮೂರು ಸೇತುವೆ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿತ್ತು. ಕೊಣನೂರು-ಕಟ್ಟೇಪುರ ನಡುವಿನ ಸೇತುವೆ ನಿರ್ಮಾಣಕ್ಕೆ ಚಾಲನೆ ಸಿಕ್ಕಿರಲಿಲ್ಲ. ಈಗ ಶಾಸಕನಾಗಿದ್ದು, ಕಳೆದ ವಿಧಾನಸಭಾ ಅಧಿವೇಶನದ ವೇಳೆ ಸರ್ಕಾರದ ಗಮನ ಸೆಳೆದಿದ್ದೆ. ಆ ವೇಳೆ ಪರಿಶೀಲನೆ ನಡೆಸಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದ್ದರು.

ಇತ್ತೀಚೆಗೆ ಹಾಸನದಲ್ಲಿ ನಡೆದ ಮುಖ್ಯಮಂತ್ರಿಗಳ ಕಾರ್ಯಕ್ರಮದಲ್ಲಿ ಮೊದಲ ಹಂತದ ಅನುದಾನ ಬಿಡುಗಡೆಗೆ ಕ್ರಮ ಕೈಗೊಂಡಿರುವುದಾಗಿ ತಿಳಿಸಿದ್ದರು. ಕೂಡಲೇ ಸೇತುವೆ ಕಾಮಗಾರಿ ಕೈಗೊಳ್ಳುವಂತೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ್ದೇನೆಂದು ಹೇಳಿದರು. ಕೊಣನೂರು ಮತ್ತು ಕಟ್ಟೇಪುರ ನಡುವೆ ಸೇತುವೆ ನಿರ್ಮಾಣದಿಂದ ಸುಮಾರು 20 ಕಿ.ಮೀ. ಅಂತರದ ಸಂಚಾರಕ್ಕೆ ತಡೆ ಬೀಳಲಿದೆ. ಕೆಲವೇ ಕಿ.ಮೀ. ಅಂತರದಲ್ಲಿ ಈ ಎರಡು ಗ್ರಾಮಗಳು ಹಾಗು ಹತ್ತಾರು ಗ್ರಾಮಗಳ ಸಂಪರ್ಕ ಅತೀ ಸಮೀಪದಿಂದ ಕೂಡಿದೆ. ಸೇತುವೆ ನಿರ್ಮಾಣ ಕಾವೇರಿ ನದಿಯ ಮಧ್ಯೆ ನಡೆಯಲಿದೆ. ಸಂಪರ್ಕ ರಸ್ತೆಯನ್ನು ಸರ್ಕಾರಿ ಖರಾಬು, ಹಾಲಿ ರಸ್ತೆ ಜಾಗವನ್ನು ಬಳಕೆ ಮಾಡಿಕೊಂಡು ಸಂಪರ್ಕ ರಸ್ತೆ ಅಭಿವೃದ್ಧಿಯನ್ನು ಕೈಗೊಳ್ಳಬೇಕು. 45 ಕೋಟಿ ರೂ. ಅನುದಾನದಲ್ಲಿ 6 ಕೋಟಿ ರೂ. ಹಣ ವಶಕ್ಕೆ ಪಡೆಯುವ ಜಮೀನಿಗೆ ಮೀಸಲಿಡಲಾಗಿದೆ. ಮುಂದಿನ 20 ವರ್ಷಗಳ ವಿಷನ್ ಇಟ್ಟುಕೊಂಡು ಸೇತುವೆ ಮತ್ತು ಸಂಪರ್ಕ ರಸ್ತೆಯ ಅಭಿವೃದ್ಧಿಗೆ ಯೋಜನೆ ರೂಪಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಒಂದು ವರ್ಷದಲ್ಲಿ 2,499 ಅಪಘಾತ, 426 ಸಾವು

## ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಲತಾಕುಮಾರಿ | ಸುರಕ್ಷತಾ ಕ್ರಮಕ್ಕೆ ಸೂಚನೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಳೆದ ಒಂದು ವರ್ಷದಲ್ಲಿ 2,499 ಅಪಘಾತ ಸಂಭವಿಸಿ 426 ಸಾರ್ವಜನಿಕರು ಮೃತಪಟ್ಟಿದ್ದಾರೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸುಗಮವಾಗಿ ಸಂಚಾರ ಮಾಡಲು ಅನುವು ಮಾಡಿಕೊಡುವ ನಿಟ್ಟಿನಲ್ಲಿ ರಸ್ತೆ ಸುರಕ್ಷತೆಗೆ ಆದ್ಯತೆ ನೀಡಬೇಕು. ರಸ್ತೆ ಅಪಘಾತ ಸಂಭವಿಸುತ್ತಿರುವ ಸ್ಥಳ ಗುರುತಿಸಿ ಸಾರ್ವಜನಿಕರು ಎಚ್ಚರ ವಹಿಸಲು ಹಾಗೂ ಮಾಹಿತಿಗಾಗಿ ಫಲಕಗಳನ್ನು ಅಳವಡಿಸಬೇಕು.

ರಸ್ತೆ ಸುರಕ್ಷತಾ ಸಭೆಯನ್ನು ತಾಲೂಕು ಮಟ್ಟದಲ್ಲಿಯೂ ನಡೆಸಿ ಸೂಕ್ತ ಕ್ರಮ ವಹಿಸುವಂತೆ ತಿಳಿಸಿದ ಅವರು, ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕು. ಈ ನಿಟ್ಟಿನಲ್ಲಿ ತಾಲೂಕು ಮಟ್ಟದಲ್ಲಿ ಅನುಷ್ಠಾನ ಮಾಡಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈಗಾಗಲೇ ಆಗಿರುವ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿ ಎಚ್ಚರಿಕೆ ವಹಿಸಬೇಕು. ರಸ್ತೆ ಅಪಘಾತ ಸಂಭವಿಸಿ ಸಾರ್ವಜನಿಕರ ಜೀವ ಕಳೆದುಕೊಳ್ಳುತ್ತಾರೆ. ಪ್ರತಿಯೊಬ್ಬರ ಜೀವ ಅಮೂಲ್ಯವಾದುದು. ಅದನ್ನು ಉಳಿಸುವ ನಿಟ್ಟಿನಲ್ಲಿ ರಸ್ತೆ ಸುರಕ್ಷತೆಗೆ ಗಮನ ಹರಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪಾದಾಚಾರಿಗಳು ಓಡಾಡಲು ಇರುವ ಫುಟ್‌ಪಾತ್‌ನಲ್ಲಿ ವ್ಯಾಪಾರ ನಡೆಸುತ್ತಿದ್ದಾರೆ. ಪಾದಾಚಾರಿಗಳು ರಸ್ತೆಯಲ್ಲಿ ಸಂಚಾರ ಮಾಡುವುದರಿಂದ ಅಪಘಾತ ಸಂಭವಿಸುತ್ತಿವೆ. ಹಿಟ್ ಅಂಡ್ ರನ್ ಪ್ರಕರಣಗಳು ನಡೆಯುತ್ತವೆ. ಫುಟ್‌ಪಾತ್ ತೆರವುಗೊಳಿಸಲು ಸ್ಥಳೀಯ ಸಂಸ್ಥೆ ಅಧಿಕಾರಿಗಳು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರು ರಸ್ತೆ ಬದಿಯಲ್ಲಿ ಕಸ ಹಾಕುತ್ತಾರೆ. ರಸ್ತೆ ಬದಿಯಲ್ಲಿ ಕಸದ ರಾಶಿ ಕಂಡುಬಂದಲ್ಲಿ ರಸ್ತೆ ಮಾಲೀಕರೇ ಜವಾಬ್ದಾರಾರು ಎಂದು ತಿಳಿಸಿದರು.

ಸಿ.ಸಿ.ಕ್ಯಾಮರ ಅಳವಡಿಸುವುದು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಟ್ರ್ಯಾಕ್ಟರ್‌ಗೆ ರಿಫ್ಲೆಕ್ಟರ್ ಅಳವಡಿಸಲು ಕ್ರಮ ಕೈಗೊಳ್ಳಲು ತಿಳಿಸಿದರಲ್ಲದೆ ವಾಹನಗಳನ್ನು ವ್ಯವಸ್ಥಿತವಾಗಿ ನಿಲುಗಡೆಗೆ ಬೋರ್ಡ್ ಅಳವಡಿಸುವುದು ಹಾಗೂ ರಸ್ತೆಗಳಲ್ಲಿ ಸುಗಮ ಸಂಚಾರಕ್ಕೆ ಸೈನೇಜ್ ಬೋರ್ಡ್ ಹಾಕಲು ಕ್ರಮ ವಹಿಸುವಂತೆ ಸೂಚಿಸಿದರು.

ಶಾಲಾ ಕಾಲೇಜು ಮಕ್ಕಳಿಗೆ ಟ್ರಾಫಿಕ್ ಸಿಗ್ನಲ್ ಬಗ್ಗೆ ಅರಿವು ಮೂಡಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಅಧಿಕಾರಿ, ಸಿಬ್ಬಂದಿ ಹಾಗೂ ಚಾಲಕರಿಗೆ ಟ್ರಾಫಿಕ್ ಸಿಗ್ನಲ್ ಹಾಗೂ ರಸ್ತೆ ಸುರಕ್ಷತೆ ಕುರಿತು ಒಂದು ಪರೀಕ್ಷೆ ನಡೆಸಲಾಗುವುದು. ವಿಜೇತರಾದವರಿಗೆ ಜನವರಿ 26ರಂದು ಬಹುಮಾನ ನೀಡಲಾಗುವುದು ಎಂದು ತಿಳಿಸಿದರು.

ವಾಣಿಜ್ಯ ಸಂಕೀರ್ಣ, ಕಲ್ಯಾಣ ಮಂಟಪಗಳಲ್ಲಿ ವಾಹನ ನಿಲುಗಡೆಗೆ ಸೂಕ್ತ ಸ್ಥಳಾವಕಾಶ ಇರಬೇಕು. ರಸ್ತೆ ಬದಿಯಲ್ಲಿ ವಾಹನ ನಿಲುಗಡೆ ಮಾಡುವುದರಿಂದ ಅಪಘಾತ ನಡೆಯಲು ಕಾರಣವಾಗುತ್ತಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪರವಾನಗಿ ಇಲ್ಲದೆ ವಾಹನ ಚಾಲನೆ ಮಾಡಬಾರದು. ಪೋಷಕರು 18 ವರ್ಷದೊಳಗಿನ ಮಕ್ಕಳಿಗೆ ವಾಹನ ಚಾಲನೆ ಮಾಡಲು ನೀಡಬಾರದು. ಈ ನಿಟ್ಟಿನಲ್ಲಿ ಅರಿವು ಮೂಡಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕುರಿ, ಕೋಳಿ ತ್ಯಾಜ್ಯವನ್ನುರಸ್ತೆ ಬದಿಯಲ್ಲಿ ಹಾಕುತ್ತಿರುವುದರಿಂದ ನಾಯಿಗಳು ತಿನ್ನಲು ಬರುತ್ತವೆ. ವಾಹನಗಳಿಗೆ ಅಡ್ಡ ಬರುವುದರಿಂದ ಅಪಘಾತ ಸಂಭವಕ್ಕೆ ಕಾರಣವಾಗುತ್ತದೆ. ರಸ್ತೆಗಳ ಬದಿಯಲ್ಲಿ ತ್ಯಾಜ್ಯ ಹಾಕಬಾರದು. ಹಾಕಿದ್ದಲ್ಲಿ ತೆರವುಗೊಳಿಸುವ ಜವಾಬ್ದಾರಿ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸುವಂತೆ ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಾಜು, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಮತ್ತಿತರರಿದ್ದರು.

# ನುಗ್ಗೇಹಳ್ಳಿ ಗ್ರಾ.ಪಂ. ಅಧ್ಯಕ್ಷರಾಗಿ ನಟರಾಜ್ ಆಯ್ಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ತಾಲೂಕಿನ ನುಗ್ಗೇಹಳ್ಳಿ ಹೋಬಳಿ ಕೇಂದ್ರದ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಸದಸ್ಯ ಎನ್.ಆರ್ .ನಟರಾಜ್ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾದರು.

ಅಧ್ಯಕ್ಷರಾಗಿದ್ದ ಹೊನ್ನೇಗೌಡ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಡೆಯಿತು. ಎನ್.ಆರ್. ನಟರಾಜ್ ಹೊರತುಪಡಿಸಿ ಬೇರೆ ಯಾವ ಸದಸ್ಯರು ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸದೆ ಇದ್ದಿದ್ದರಿಂದ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಹರೀಶ್ ಘೋಷಿಸಿದರು.

ಅಧ್ಯಕ್ಷ ಎನ್.ಆರ್.ನಟರಾಜ್ ಮಾತನಾಡಿ, ಹೋಬಳಿ ಕೇಂದ್ರದ ಗ್ರಾಮ ಪಂಚಾಯಿತಿ ಆಗಿರುವುದರಿಂದ ಪ್ರಥಮ ಆದ್ಯತೆಯಾಗಿ ಸ್ವಚ್ಛತೆ ಹಾಗೂ ಕುಡಿಯುವ ನೀರಿಗೆ ಹೆಚ್ಚಿನ ಗಮನ ಹರಿಸಬೇಕಾಗಿದೆ. ಅದರ ಜೊತೆಗೆ ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ ಅವರ ಮಾರ್ಗದರ್ಶನದಲ್ಲಿ ಹೆಚ್ಚಿನ ಅನುದಾನ ತರುವ ಮೂಲಕ ರಸ್ತೆ ಸೇರಿ ವಿವಿಧ ಅಭಿವೃದ್ಧಿ ಕೆಲಸಗಳಿಗೆ ಹೆಚ್ಚು ಗಮನ ಹರಿಸಲಾಗುತ್ತದೆ ಎಂದು ತಿಳಿದರು.

ನುಗ್ಗೇಹಳ್ಳಿ ಪುರವರ್ಗ ಹಿರೇಮಠದ ಡಾ.ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಕುಸುಮಬಾಲಕೃಷ್ಣ ಅವರು ನೂತನ ಅಧ್ಯಕ್ಷರನ್ನು ಸನ್ಮಾನಿಸಿದರು. ಗ್ರಾ.ಪಂ ಉಪಾಧ್ಯಕ್ಷೆ ರಾಧಾಮಣಿ ಹರೀಶ್, ಟಿಎಪಿಎಂಎಸ್ ನಿರ್ದೇಶಕ ತೋಟಿ ನಾಗರಾಜ್, ಮಾಜಿ ಜಿ.ಪಂ. ಅಧ್ಯಕ್ಷ ಮಹಾದೇವಮ್ಮ ಶಂಕರ್, ಉಪಾಧ್ಯಕ್ಷ ಎಚ್.ಎಂ.ನಟರಾಜ್, ಮುಖಂಡರಾದ ಬಿ.ಸಿ.ದೊರೆಸ್ವಾಮಿ, ಎಚ್.ಎಂ.ಜಯರಾಮ್, ಮಹಮ್ಮದ್ ಜಾವಿದ್, ಜಿಲ್ಲಾ ಯಾದವ ಸಂಘದ ಮಾಜಿ ಅಧ್ಯಕ್ಷ ಹುಲ್ಲೇನಹಳ್ಳಿ ನಾರಾಯಣ್, ಗ್ರಾಮ ಪಂಚಾಯಿತಿ ಸದಸ್ಯರಾದ ವಿಠಲ್‌ಕುಮಾರ್, ಎನ್.ಆರ್.ಶಿವಕುಮಾರ್, ಎನ್.ಎಸ್.ಮಂಜುನಾಥ್, ವಿಜಯಲಕ್ಷ್ಮಿ ಜಗದೀಶ್, ಶಬೀನ್‌ತಾಜ್ ಮಹಮ್ಮದ್ ಜಾವಿದ್, ಮಂಜುಳಾ ಗೋಪಾಲ್, ದ್ರಾಕ್ಷಾಯಿಣಿ ಯಲ್ಲಪ್ಪ, ರಾಜು, ರಮ್ಯಾ ಲೋಕೇಶ್ ಇತರರಿದ್ದರು.

# ಕೆರೆಗಳಿಗೆ ನೀರು ತುಂಬಿಸಿದರೆ ರೈತರ ಬದುಕು ಹಸನು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಕೆರೆ-ಕಟ್ಟೆಗಳಿಗೆ ಏತ ನೀರಾವರಿ ಯೋಜನೆ ಮೂಲಕ ನೀರು ತುಂಬಿಸಿದ್ದಲ್ಲಿ ಮಾತ್ರ ರೈತರ ಬದುಕು ಹಸನಾಗಲು ಸಾಧ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು. ತಾಲೂಕಿನ ನುಗ್ಗೇಹಳ್ಳಿ ಗ್ರಾಮದಲ್ಲಿ ಏತ ನೀರಾವರಿ ಯೋಜನೆಯಡಿ ತುಂಬಿ ಹರಿಯುತ್ತಿರುವ ಕೆರೆಗೆ ವಿಶೇಷ ಪೂಜೆ ಸಲ್ಲಿಸಿ ಬಾಗಿನ ಅರ್ಪಿಸಿ ಮಾತನಾಡಿ, ರೈತರ ಬದುಕು ಪ್ರಗತಿ ಹೊಂದಿದರೆ ಮಾತ್ರ ದೇಶ ಅಭಿವೃದ್ಧಿ ಕಾಣಲು ಸಾಧ್ಯ ಎಂದರು.

ಕೆರೆ-ಕಟ್ಟೆಗಳು ತುಂಬಿದರೆ ಅಂತರ್ಜಲ ಚೇತರಿಕೆ ಕಾಣಲಿದ್ದು ಕೊಳವೆ ಬಾವಿಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಲಭ್ಯವಾಗಲಿದೆ. ಅದರಿಂದ ರೈತರ ಕೃಷಿ ಚಟುವಟಿಕೆ ಇಮ್ಮಡಿಗೊಳ್ಳಲಿದ್ದು ಆರ್ಥಿಕವಾಗಿ ರೈತ ವರ್ಗದ ಬದುಕು ಸದೃಢಗೊಳ್ಳಲಿದೆ ಎಂದು ತಿಳಿಸಿದರು.

ಸುಮಾರು 20-25 ವರ್ಷಗಳಿಂದ ವ್ಯಾಪ್ತಿಯಲ್ಲಿ ವಾಡಿಕೆಯಂತೆ ಮಳೆಯಾಗದ ಕಾರಣ ಕೆರೆಕಟ್ಟೆಗಳು ನೀರಿಲ್ಲದೆ ಬಣಗುಡುತ್ತಿದ್ದವು. ಅಂತರ್ಜಲ ಕುಸಿದು ಕೊಳವೆ ಬಾವಿಗಳು ನೀರಿಲ್ಲದೆ ಬತ್ತಿ ಬರಿದಾಗಿದ್ದವು. ರೈತರ ಆರ್ಥಿಕ ಬೆಳೆಯಾದ ತೆಂಗಿನ ಮರಗಳು ನಾಶವಾಗಿದ್ದು ರೈತರ ಬದುಕು ನಿಂತ ನೀರಾಗಿತ್ತು. ಸದ್ಯ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಿ ವ್ಯಾಪ್ತಿಯ ಕೆರೆಗಳಿಗೆ ನೀರು ತುಂಬಿಸಿರುವ ಪರಿಣಾಮ ಈ ಭಾಗದ ರೈತರ ಬದುಕು ಚೇತರಿಕೆ ಕಂಡಿದೆ ಎಂದರು. ಗ್ರಾಮದ ದೇವಾಲಯ ವ್ಯಾಪ್ತಿಯ ಹಾಗೂ ಕೆಲವು ರಸ್ತೆಗಳನ್ನು ಚರಂಡಿ ಹಾಗೂ ಕಾಂಕ್ರೀಟ್ ವ್ಯವಸ್ಥೆಯೊಂದಿಗೆ ಅಭಿವೃದ್ಧಿಗೊಳಿಸಲಾಗುವುದು. ಅನುದಾನಗಳ ಲಭ್ಯತೆ ಅವಲಂಬಿಸಿ ಮತ್ತಷ್ಟು ಕಾಮಗಾರಿಗಳನ್ನು ಕೈಗೊಳ್ಳುವ ಮೂಲಕ ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಪುರವರ್ಗ ಹಿರೇಮಠದ ಶ್ರೀ ಮಹೇಶ್ವರ ಶಿವಾಚಾರ್ಯ ಸ್ವಾಮೀಜಿಯವರು ಗಂಗೆ ಪೂಜೆ ಹಾಗೂ ಬಾಗಿನ ಸಮರ್ಪಿಸುವ ಧಾರ್ಮಿಕ ಕಾರ್ಯಕ್ರಮ ನೆರವೇರಿಸಿಕೊಟ್ಟರು. ಶಾಸಕರು ಕೆರೆಯ ಮಧ್ಯ ಭಾಗಕ್ಕೆ ತೆಪ್ಪದಲ್ಲಿ ತೆರಳಿ ಬಾಗಿನ ಅರ್ಪಿಸಿದ್ದು ವಿಶೇಷವಾಗಿತ್ತು.

ಟಿಎಪಿಸಿಎಂಎಸ್ ನಿರ್ದೇಶಕ ತೋಟಿ ನಾಗರಾಜ್, ಎಪಿಎಂಸಿ ಮಾಜಿ ಅಧ್ಯಕ್ಷ ಬಿ.ಆರ್.ದೊರೆಸ್ವಾಮಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ನಟರಾಜ್, ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಸಂಪತ್ ಕುಮಾರ್ ಹಾಗೂ ಗ್ರಾಮಸ್ಥರು ಇದ್ದರು.

# ಶಿಕ್ಷಣದ ಜೊತೆಗೆ ವ್ಯವಹಾರ ಜ್ಞಾನ ಅಗತ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಮಕ್ಕಳಲ್ಲಿ ವ್ಯವಹಾರಿಕ ಜ್ಞಾನ ಬೆಳೆಯಲು ಮಕ್ಕಳ ಸಂತೆಯ ಕಾರ್ಯಕ್ರಮ ಹೆಚ್ಚು ಸಹಕಾರಿಯಾಗಲಿವೆ ಎಂದು ಜ್ಞಾನಪ್ರಭ ಇಂಟರ್‌ನ್ಯಾಷನಲ್ ಶಾಲೆಯ ಅಧ್ಯಕ್ಷ ಎ.ಜಿ.ಪ್ರಭಾಕರ್ ಹೇಳಿದರು.

ತಾಲೂಕಿನ ಹಿರೀಸಾವೆ ಗ್ರಾಮದ ಜ್ಞಾನಪ್ರಭ ಇಂಟರ್‌ನಾಷನಲ್ ಶಾಲಾ ಆವರಣದಲ್ಲಿ ಆಯೋಜಿಸಿದ್ದ ಮಕ್ಕಳ ಸಂತೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಭವಿಷ್ಯದಲ್ಲಿ ಬದುಕನ್ನು ಸುಂದರ ಹಾಗೂ ಸುಭದ್ರವಾಗಿ ಕಟ್ಟಿಕೊಳ್ಳಲು ಶಿಕ್ಷಣದ ಜೊತೆಗೆ ವ್ಯವಹಾರಿಕ ಜ್ಞಾನ ಅಗತ್ಯ ಎಂದರು. ಸರ್ಕಾರಿ ಹಾಗೂ ಖಾಸಗಿಯಾಗಿ ಉನ್ನತ ಹುದ್ದೆಗಳನ್ನು ಹರಸಿ ಶಿಕ್ಷಣ ಪಡೆಯಬಾರದು. ಸಮಾಜದಲ್ಲಿ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುವ ಸಲುವಾಗಿ ವಿದ್ಯೆ ದೀಕ್ಷೆಯಾಗಿ ಸ್ವೀಕರಿಸಬೇಕು. ನಂತರದಲ್ಲಿ ಎಲ್ಲವೂ ತಾನಾಗಿಯೇ ಸಿಗಲಿದೆ ಎಂದು ತಿಳಿಸಿದರು.

ನಿರೀಕ್ಷೆ ಮೀರಿದಂತೆ ಮುಂದುವರಿದು ಬೆಳೆಯುತ್ತಿರುವ ಅತ್ಯಾಧುನಿಕ ಜಗತ್ತಿನಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಶಿಕ್ಷಣದ ಜೊತೆಗೆ ವ್ಯವಹಾರ ಜ್ಞಾನವು ಅಗತ್ಯವಾಗಲಿದೆ. ಮೌಲ್ಯಯುತ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಹಾಗೂ ವ್ಯವಹಾರ ಜ್ಞಾನ ಮುಖ್ಯವಾಗಲಿದ್ದು ಸ್ವಂತಿಕೆಯಿಂದ ಯಾವ ಕ್ಷೇತ್ರದಲ್ಲಾದರೂ ತೊಡಗಿಸಿಕೊಂಡು ಎಲ್ಲವನ್ನು ಸಾಧಿಸಬಹುದು ಎಂದು ಸಲಹೆ ನೀಡಿದರು. ಮಕ್ಕಳ ಸಂತೆಯಲ್ಲಿ ಹಣ್ಣು-ತರಕಾರಿ, ಸೊಪ್ಪು, ಜ್ಯೂಸ್, ಐಸ್ ಕ್ರೀಮ್, ಪಾನಿ ಪುರಿ, ಗೋಬಿ, ಕಾಫಿ, ಟೀ ಮತ್ತು ಬಾದಾಮಿ ಹಾಲು, ಮನೆ ಬಳಕೆ ವಸ್ತುಗಳು ಹಾಗೂ ಉತ್ತರ ಕರ್ನಾಟಕ ಶೈಲಿಯ ಉಪಾಹಾರ, ಊಟ ಸೇರಿ ವಿವಿಧ ವ್ಯಾಪಾರಗಳಲ್ಲಿ ವಿದ್ಯಾರ್ಥಿಗಳು ಉತ್ಸುಕರಾಗಿ ಪಾಲ್ಗೊಂಡಿದ್ದು ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವ್ಯಾಪಾರ ಮಾಡುವ ಮೂಲಕ ಮಕ್ಕಳಿಗೆ ಪ್ರೋತ್ಸಾಹ ನೀಡಿದ್ದು ವಿಶೇಷವಾಗಿತ್ತು.

ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎ.ಜಿ.ಪ್ರಭಾಕರ್, ಕಾರ್ಯದರ್ಶಿ ಎಂ.ಕೆ. ಹರೀಶ್, ಪ್ರಾಂಶುಪಾಲ ಬಿ.ಸಂಜಯ್ ಕ್ರಿಸ್ಟೋಫರ್, ಪ್ರಮುಖರಾದ ರಾಮು, ಪಾಲಕರು ಹಾಗೂ ಇತರರು ಇದ್ದರು.

# ಡ್ರಗ್ ಫ್ರೀ ಹಾಸನ ನಿರ್ಮಾಣಕ್ಕೆ ಪಣ ತೊಡಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಾದಕ ವಸ್ತುಗಳ ಸೇವನೆ ಹೆಚ್ಚಾಗುತ್ತಿದ್ದು ಅದನ್ನುತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ವಹಿಸುವ ಮೂಲಕ ಡ್ರಗ್ ಫ್ರೀ ಹಾಸನ ನಿರ್ಮಾಣಕ್ಕೆ ಪಣ ತೊಡಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ನಾರ್ಕೋ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಔಷಧಿ ಅಂಗಡಿಗಳ ಮೇಲೆ ಅನಿರೀಕ್ಷಿತ ದಾಳಿ ನಡೆಸಲು ಸಹಾಯಕ ಔಷಧಿ ನಿಯಂತ್ರಣಾಧಿಕಾರಿಗೆ ಸೂಚಿಸಿದರು.

ಗಾಂಜಾ ಸಾಗಾಣಿಕೆ ತಡೆಗಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಎಚ್ಚೆತ್ತು ವಾಹನಗಳ ತಪಾಸಣೆ ಮಾಡಬೇಕು. ರೈಲುಗಳ ಮೂಲಕ ಕೂಡ ಸಾಗಾಣಿಕೆ ಪತ್ತೆ ಹಚ್ಚಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸಲು ನಿರ್ದೇಶನ ನೀಡಿದರು.

ಶಾಲಾ, ಕಾಲೇಜು ಆವರಣದಿಂದ ನಿಗದಿತ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಉತ್ಪನ್ನಗಳು ಮಾರಾಟ ಆಗಬಾರದು. ಜೊತೆಗೆ ಮಕ್ಕಳ ಕೈಗೆ ದೊರಕದಂತೆ ಎಚ್ಚರ ವಹಿಸಬೇಕು. ಹಾಸ್ಟೆಲ್‌ಗಳಲ್ಲಿ ಮಕ್ಕಳ ಚಲನವಲನಗಳ ಮೇಲೆ ನಿಗಾವಹಿಸಿ ಸೂಕ್ಷ್ಮವಾಗಿ ಗಮನಿಸಿ ಬದಲಾವಣೆ ಪತ್ತೆ ಹಚ್ಚಲು ವಾರ್ಡನ್‌ಗಳಿಗೆ ತರಬೇತಿ ನೀಡಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸ್ವಯಂ ಸೇವಾ ಸಂಘಗಳನ್ನು ಬಳಸಿಕೊಂಡು ಜಾಗೃತಿ ಕಾರ್ಯಕ್ರಮ ಆಯೋಜಿಸುವಂತೆ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೃಷ್ಣಮೂರ್ತಿ ಮತ್ತಿತರರು ಹಾಜರಿದ್ದರು.

# ಶಾಂತಿ ವಾಹನ ಸಾರ್ವಜನಿಕರ ಸೇವೆಗೆ ಲೋಕಾರ್ಪಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲೂಕಿನ ಸಾರ್ವಜನಿಕರಿಗೆ ಉಪಯೋಗವಾಗುವ ನಿಟ್ಟಿನಲ್ಲಿ 14 ಲಕ್ಷ ರೂ. ವೆಚ್ಚದಲ್ಲಿ ಶಾಂತಿ ವಾಹನವನ್ನು ಸಿದ್ಧಪಡಿಸಿದ್ದು, ಸಾರ್ವಜನಿಕರ ಮೃತದೇಹವನ್ನು ಸಾಗಿಸಲು ವಾಹನವನ್ನು ಸೇವೆಗೆ ಅರ್ಪಿಸಲಾಯಿತು.

ಪಟ್ಟಣದ 40 ಅಡಿ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಗುರುವಾರ ಸಮಾನ ಮನಸ್ಕರರು ಸೇರಿ ಶಾಂತಿವಾಹನ ಸಾರ್ವಜನಿಕರ ಸೇವೆಗೆ ಲೋಕಾರ್ಪಣೆ ಮಾಡಿದ ಬಳಿಕ ಪುರಸಭಾ ಮಾಜಿ ಸದಸ್ಯ ಸಿ.ಪಿ.ಕುಮಾರ್ ಮಾತನಾಡಿ, ಸಮಾನ ಮನಸ್ಕರು ಹಾಗೂ ಸಾರ್ವಜನಿಕರಿಂದ ಸಂಗ್ರಹವಾದ ದೇಣಿಗೆಯಲ್ಲಿ 14 ಲಕ್ಷ ರೂ. ವೆಚ್ಚದಲ್ಲಿ ಶಾಂತಿ ವಾಹನ ರೂಪಿಸಿದ್ದು, ಪಾರ್ಥಿವ ಶರೀರವನ್ನು ರುದ್ರಭೂಮಿಗೆ ತೆಗೆದುಕೊಂಡು ಹೋಗಲು ಎಲ್ಲ ರೀತಿಯ ಅನುಕೂಲಗಳನ್ನು ಅದರಲ್ಲಿ ಕಲ್ಪಿಸಲಾಗಿದೆ. 5 ತಿಂಗಳಿಂದ ಸಮಾನ ಮನಸ್ಕರು ಸೇರಿ ಚರ್ಚಿಸಿ ಅದಕ್ಕೆ ಚಾಲನೆ ನೀಡಿದ್ದು, ರುದ್ರಭೂಮಿಗೆ ಶವಸಾಗಿಸಲು ಅನುಕೂಲವಾಗಲಿ ಎಂಬ ದೃಷ್ಟಿಯಿಂದ ಶಾಂತಿ ವಾಹನ ಆರಂಭಿಸಲಾಯಿತು. ಬಡಕುಟುಂಬಕ್ಕೆ ಸೇರಿದವರಿಗೆ ಉಚಿತವಾಗಿ ನೀಡಲಾಗುವುದು. ಅದೇ ರೀತಿ ಅನಾಥ ಶವಗಳನ್ನು ಉಚಿತವಾಗಿ ಸಾಗಿಸಲಾಗುವುದು. ಸ್ಥಿತಿವಂತ ಕುಟುಂಬದವರು ಇಂಧನದ ವೆಚ್ಚ ಭರಿಸಬೇಕಾಗುತ್ತದೆ. ಶಾಂತಿ ವಾಹನದ ನಿರ್ವಹಣೆ ಮಾಡಲಾಗುವುದು. ಚನ್ನರಾಯಪಟ್ಟಣ ತಾಲ್ಲೂಕಿಗೆ ಅದರ ಅನುಕೂಲವಾಗಲಿದೆ. ವಾಹನದ ಎರಡೂ ಬದಿಗಳಲ್ಲಿ ಗಾಜಿನಿಂದ ಗೋಡೆಗಳನ್ನು ಅಳವಡಿಸಿರುವುದರಿಂದ ಮೃತದೇಹ ಹೊರಗಿನಿಂದಲೇ ನೋಡುವ ಅವಕಾಶವೂ ಇದೆ ಎಂದರು. ಪುರಸಭಾ ಸದಸ್ಯ ಸಿ.ಎನ್.ಶಶಿಧರ್ ಮಾತನಾಡಿ, ಶಾಂತಿ ವಾಹನದ ನಿರ್ವಹಣೆ ನಮ್ಮ ಸಂಸ್ಥೆ ಹೊರಲಿದ್ದು, ಅದರ ಇಂಧನ ವೆಚ್ಚವನ್ನು ನಮ್ಮ ಸಂಸ್ಥೆಯೇ ಭರಿಸಲಿದೆ ಎಂದರು.

ನಿವೃತ್ತ ವಿಶೇಷ ಜಿಲ್ಲಾಧಿಕಾರಿ ಎಚ್.ಎಂ.ನಾಗಪ್ಪ, ಶಂಕರ್, ಸಿ.ಕೆ.ಕೃಷ್ಣ ಮಾತನಾಡಿದರು. ಜಯರಾಮಯ್ಯ, ನಾಗರಾಜು. ಸಿ.ಟಿ.ಕುಮಾರಸ್ವಾಮಿ, ಜಯರಾಮ್, ಸ್ವಾಮಿ, ಜಯರಾಮ್ ಮತ್ತಿತರರು ಹಾಜರಿದ್ದರು.

# ಬೆಳಗಾವಿ ಸುವರ್ಣಸೌಧ ವೀಕ್ಷಿಸಿದ ವಿದ್ಯಾರ್ಥಿಗಳು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಶಾಲಾ ಪ್ರವಾಸಕ್ಕೆ ತೆರಳಿದ್ದ ತಾಲೂಕಿನ ಹಾರನಹಳ್ಳಿ ಸರ್ಕಾರಿ ಪ್ರೌಢಶಾಲೆ ಮಕ್ಕಳು ಕುಂದಾನಗರಿ ಬೆಳಗಾವಿಯ ಸುವರ್ಣ ಸೌಧವನ್ನು ಹತ್ತಿರದಿಂದ ಕಂಡು ಸಂತೋಷಗೊಂಡರು. ಅದೂ ಕೂಡ ತಮ್ಮೂರಿನ ಶಾಸಕ ಕೆ.ಎಂ.ಶಿವಲಿಂಗೇಗೌಡ ಎದುರು ಸಿಕ್ಕಿ ಎಲ್ಲ ಮಕ್ಕಳನ್ನು ಮಾತನಾಡಿಸಿ, ಜೊತೆಯಲ್ಲಿ ಫೋಟೋ ತೆಗೆಸಿಕೊಂಡರು. ಈ ಕ್ಷಣದಲ್ಲಿ ಮಕ್ಕಳ ಜೊತೆಗೆ ಶಿಕ್ಷಕರೂ ಹೆಚ್ಚು ಖುಷಿಪಟ್ಟರು. ಎಂದಿನಂತೆ ವರ್ಷದ ಕೊನೆಯಲ್ಲಿ ಪ್ರೌಢಶಾಲೆಯ ಮಕ್ಕಳು ಹಾಗೂ ಶಿಕ್ಷಕರು ಶೈಕ್ಷಣಿಕ ಪ್ರವಾಸ ಕೈಗೊಂಡಿದ್ದರು. ಹೇಗಿದ್ದರೂ ಬೆಳಗಾವಿಗೆ ಬಂದಿದ್ದೇವೆ, ಹಾಗೆಯೇ ಸುವರ್ಣಸೌಧ ನೋಡಿ ಹೋಗೋಣ ಎಂದುಕೊಂಡರು. ತಮ್ಮ ಕ್ಷೇತ್ರದ ಮಕ್ಕಳು ಬಂದಿದ್ದಾರೆ ಎಂಬುದನ್ನು ಅರಿತ ಶಿವಲಿಂಗೇಗೌಡರು ಅಧಿವೇಶನದಿಂದ ಹೊರ ಬಂದು ಮಕ್ಕಳನ್ನು ಪ್ರೀತಿಯಿಂದ ಮಾತನಾಡಿದರು. ಅಷ್ಟೇ ಎಲ್ಲರೊಂದಿಗೆ ಸಾಮೂಹಿಕ ಫೋಟೋ ತೆಗೆಸಿಕೊಂಡರು. ಈ ವೇಳೆ ತಮ್ಮ ಅನಿಸಿಕೆ ಹಂಚಿಕೊಂಡ ಹಲವು ಮಕ್ಕಳು, ನಮಗೆ ಈ ರೀತಿಯ ಆತಿಥ್ಯ ಸಿಗಲಿದೆ ಎಂದು ನಿರೀಕ್ಷೆ ಮಾಡಿರಲಿಲ್ಲ, ಈ ವರೆಗೂ ಮಾಧ್ಯಮಗಳಲ್ಲಿ ನೋಡಿದ್ದ ಸುವರ್ಣಸೌಧವನ್ನು ಹತ್ತಿರದಿಂದ ಕಣ್ತುಂಬಿಕೊಂಡ ಖುಷಿ ಒಂದೆಡೆಯಾದರೆ ನಮ್ಮೂರ ಶಾಸಕರು ನಮ್ಮೊಂದಿಗೆ ಕೆಲಹೊತ್ತು ಕಳೆದ ಅವಿಸ್ಮರಣೀಯ ಕ್ಷಣ ನಾವೆಂದೂ ಮರೆಯುವುದಿಲ್ಲ ಎಂದು ನುಡಿದರು.

ಕಾಂಗ್ರೆಸ್ ಯುವ ಘಟಕದ ಮುಖಂಡ ಪೃಥ್ವಿ, ಶಾಲೆಯ ಶಿಕ್ಷಕರಾದ ಶರಣಪ್ಪ ಬಳೆಗಾರ್, ಶಾಂತಕುಮಾರಿ, ತನುಜಾ, ದೇವಿಕಾ, ರಂಗನಾಥ್ ಮತ್ತು ಇತರರು ಉಪಸ್ಥಿತರಿದ್ದರು.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-14

1911: ನಾರ್ವೇದ ಅನ್ವೇಷಕ ರೋಯಾಲ್ಡ್ ಅಮುಂಡ್ಸನ್ ದಕ್ಷಿಣ ಧ್ರುವವನ್ನು ತಲುಪಿದ ಮೊದಲ ವ್ಯಕ್ತಿಯಾಗಿ ಇತಿಹಾಸ ನಿರ್ಮಿಸಿದರು.

1960: ವಿಶ್ವಸಂಸ್ಥೆಯ ಮಹಾಸಭೆಯಲ್ಲಿ ವಸಾಹತುಶಾಹಿಯಿಂದ ಮುಕ್ತಿ ಕುರಿತ ಘೋಷಣೆ ಅಂಗೀಕಾರವಾಯಿತು. ಇದು ಅನೇಕ ದೇಶಗಳ ಸ್ವಾತಂತ್ರ್ಯ ಹೋರಾಟಕ್ಕೆ ಶಕ್ತಿ ನೀಡಿತು.

1995: ಯುರೋಪಿನ ದೀರ್ಘಕಾಲದ ಸಂಘರ್ಷಕ್ಕೆ ತೆರೆ ಎಳೆದ ಡೇಟನ್ ಶಾಂತಿ ಒಪ್ಪಂದಕ್ಕೆ ಅಧಿಕೃತ ಸಹಿ ಹಾಕಲಾಯಿತು.

### ಜನನ

1924: ಭಾರತೀಯ ಚಿತ್ರರಂಗದ ದಿಗ್ಗಜ, ಶೋಮ್ಯಾನ್ ಎಂದೇ ಖ್ಯಾತರಾದ ರಾಜ್ ಕಪೂರ್

### ಮರಣ

1799: ಅಮೆರಿಕದ ಮೊದಲ ಅಧ್ಯಕ್ಷ, ಸ್ವಾತಂತ್ರ್ಯ ಹೋರಾಟದ ನಾಯಕ ಜಾರ್ಜ್ ವಾಷಿಂಗ್ಟನ್

1989: ಸೋವಿಯತ್ ಭೌತಶಾಸ್ತ್ರಜ್ಞ, ಮಾನವ ಹಕ್ಕು ಹೋರಾಟಗಾರ ಹಾಗೂ ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ ಆಂದ್ರೆ ಸಖರೋವ್

# ಹಾಸನದಲ್ಲಿ ಸ್ಕಾಲರ್ಸ್ ಒಲಂಪಿಕ್ಸ್ 14 ಆಯೋಜನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸ್ಕಾಲರ್ಸ್ ಶಾಲೆಯಿಂದ ಸ್ಕಾಲರ್ಸ್ ಒಲಂಪಿಕ್ಸ್ 14 ಆಯೋಜಿಸಲಾಗಿತ್ತು.

ಹಾಕಿ ತರಬೇತಿದಾರ ಹೆಚ್.ಬಿ.ರವೀಶ್ ಮಾತನಾಡಿ, ಕ್ರೀಡೆಗಳು ಎಲ್ಲರನ್ನು ಒಗ್ಗೂಡಿಸುತ್ತವೆ. ಕ್ರೀಡೆಯ ಮೂಲಕ ನಾವು ಆರೋಗ್ಯಕರ ಸಮಾಜವನ್ನು ರಚಿಸಬಹುದು. ಪ್ರತಿಯೊಬ್ಬ ವಿದ್ಯಾರ್ಥಿಯು ಕ್ರೀಡೆಗಳಲ್ಲಿ ಭಾಗವಹಿಸಬೇಕೆಂದು ಸಲಹೆ ನೀಡಿದರು.

ಬಾಸ್ಕೆಟ್ ಬಾಲ್ ತರಬೇತಿದಾರ ರವಿಶಂಕರ್ ಸಿ. ಅನ್ವೂರ್ ಮಾತನಾಡಿ, ವಿದ್ಯಾರ್ಥಿಗಳು ಪ್ರಯತ್ನವನ್ನು ಎಂದಿಗೂ ನಿಲ್ಲಿಸಬಾರದು. ಭರವಸೆಯನ್ನು ಎಂದೂ ಕಳೆದುಕೊಳ್ಳಬಾರದು. ಸೋಲು ಗೆಲುವಿನ ಸೋಪಾನ ಎಂಬುದನ್ನು ಮರೆಯಬಾರದೆಂದರು. ಆಯುಷ್ ಇಲಾಖೆ ಗೆಜೆಟೆಡ್ ಅಧಿಕಾರಿ ಡಾ. ರಾಮ್ ಪ್ರವೀಣ್ ಮಾತನಾಡಿ, ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸಿರುತ್ತದೆ. ಮನುಷ್ಯ ಆರೋಗ್ಯವಂತನಾಗಿದ್ದಾಗ ಮಾತ್ರ ಉತ್ತಮ ಆಲೋಚನೆಗಳನ್ನು ಮಾಡಲು ಸಾಧ್ಯ. ಜೀವನದಲ್ಲಿ ಸ್ವಯಂ ಸುಧಾರಣೆ ನಮ್ಮ ಮೊದಲ ಆದ್ಯತೆಯಾಗಿರಬೇಕು. ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕೆಂದರು.

ಹಾಕಿ ಪಂದ್ಯದಲ್ಲಿ ಉತ್ತಮ ಸಾಧನೆ ಮಾಡಿದ ಐದು ವಿದ್ಯಾರ್ಥಿನಿಯರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಾಲೆಯ ಆಡಳಿತಾಧಿಕಾರಿ ಡಾ. ಎಚ್.ಎನ್. ಚಂದ್ರಶೇಖರ್, ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಮತ್ತಿತರರಿದ್ದರು.

# ಲೋಕ ಅದಾಲತ್‌ನಿಂದ ಸಮಸ್ಯೆಗೆ ಶೀಘ್ರ ಪರಿಹಾರ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಲೋಕ ಅದಾಲತ್‌ನಲ್ಲಿ ಸಂಧಾನ ಮಾಡಿಕೊಂಡರೆ ನ್ಯಾಯಾಲಯದ ಖರ್ಚು ಉಳಿಸಬಹುದು, ಶೀಘ್ರವಾಗಿ ನ್ಯಾಯ ಸಿಗುತ್ತದೆ ಎಂದು ತಾಲೂಕು ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷೆ ಎ.ಅರುಣ ಕುಮಾರಿ ತಿಳಿಸಿದರು.

ಪಟ್ಟಣದ ನ್ಯಾಯಾಲಯಗಳ ಸಂಕೀರ್ಣದಲ್ಲಿ 2025-26ನೇ ಸಾಲಿನ ಕೊನೆಯ ಮೆಗಾ ಲೋಕ ಅದಾಲತ್‌ನಲ್ಲಿ ವಿಚ್ಛೇದನ ಹಂತಕ್ಕೆ ತಲುಪಿದ್ದ ಜೋಡಿಗಳನ್ನು ಒಂದುಗೂಡಿಸಿ ಮಾತನಾಡಿ, ಕೆಲವೊಂದು ಸಲ ಬೇರೆಯವರ ಮಾತು ಕೇಳಿ ಸಹ ನ್ಯಾಯಾಲಯಗಳಿಗೆ ವಿಚ್ಛೇದನಕ್ಕೆ ಅಥವಾ ಜೀವನಾಂಶಗಳಿಗೆ ದಾವೆ ಹಾಕಿದ್ದು, ರಾಜೀ ಸಂಧಾನದಿಂದ ಕುಟುಂಬ ಜೀವನ ಸುಧಾರಿಸುತ್ತದೆ. ಪ್ರತಿಯೊಂದಕ್ಕೂ ವ್ಯಾಜ್ಯ ಮಾಡಿ ಕೋರ್ಟ್‌ಗೆ ಬರುವುದು ಒಳ್ಳೆಯದಲ್ಲ. ವ್ಯಾಜ್ಯಗಳನ್ನು ದೂರ ಮಾಡಿ ಸುಖದಿಂದ ಬಾಳಬೇಕು ಎಂದು ದಾಂಪತ್ಯ ಕುಟುಂಬಕ್ಕೆ ತಿಳುವಳಿಕೆ ನೀಡಿ ಮಕ್ಕಳು ಮತ್ತು ಪೋಷಕರ ಹಿತದೃಷ್ಟಿಯಿಂದ ಪರಸ್ಪರ ನಂಬಿಕೆಯಿಂದ ಬದುಕಲು ಪ್ರೋತ್ಸಾಹಿಸಿ, ಅವರಿಗೆ ಕಳೆದ ಕೆಲವು ದಿನಗಳಿಂದ ಬುದ್ದಿ ಹೇಳಿದ ಪರಿಣಾಮ ದಂಪತಿ ಪರಸ್ಪರ ಹಾರ ಬದಲಿಸಿಕೊಂಡು ಸಿಹಿ ತಿನಿಸಿ ಮನೆಗೆ ಹೋಗುತ್ತಿದ್ದಾರೆ. ಇಂತಹ ಘಟನೆಗಳು ಹೆಚ್ಚಬೇಕು ಎಂದರು.

ನಾಲ್ಕನೇ ಹೆಚ್ಚುವರಿ ಮತ್ತು ಜಿಲ್ಲಾ ಸತ್ರ ನ್ಯಾಯಾಧೀಶೆ ಎಂ.ಎಸ್. ಕಲ್ಪನ ಮಾತನಾಡಿ, ಜನಸಾಮಾನ್ಯರ ಅನುಕೂಲಕ್ಕಾಗಿ ಶೀಘ್ರವಾಗಿ ಪ್ರಕರಣ ಇತ್ಯರ್ಥವಾಗಬೇಕು ಎಂಬ ಸದುದ್ದೇಶದಿಂದ ಮೆಗಾ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಪಟ್ಟಣದ ಎಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಕಾನೂನು ಪ್ರಕಾರ ರಾಜಿ ಆಗಬಹುದಾದ ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿ ಇಬ್ಬರಿಗೂ ನ್ಯಾಯ ಒದಗಿಸುವ ಉದ್ದೇಶದಿಂದ ಮೆಗಾ ಲೋಕ ಅದಾಲತ್ ಆಯೋಜಿಸಲಾಗಿದೆ. ಹಲವು ವರ್ಷಗಳ ಕಾಲ ಕಾನೂನು ಹೋರಾಟ ಮಾಡಿ ಒಬ್ಬರು ಗೆಲ್ಲುತ್ತಾರೆ. ಮತ್ತೊಬ್ಬರಿಗೆ ಸೋಲಾಗುತ್ತದೆ. ಆದರೆ ಅದಾಲತ್‌ನಲ್ಲಿ ಇಬ್ಬರಿಗೂ ತೃಪ್ತಿಯಾಗುವ ತೀರ್ಮಾನ ಮಾಡಲಾಗುತ್ತದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248